**1 ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಚಿಕ್ಕಮಗಳೂರು**

ಸತ್ರ ಮೊಕದ್ದಮೆ ನಂಃ 77/2024

| | | | |
|---|---|---|---|
| ಸಾಕ್ಷಿದಾರರ ಹೆಸರು | - ರಂಜಿತಕುಮಾರಿ | | ಪಿಡಬ್ಲ್ಯೂ- 01 |
| ಗಂಡನ ಹೆಸರು | - ಕೊಟ್ರೇಶ್ | | ಸಿಡಬ್ಲ್ಯೂ -01 |
| ವಯಸ್ಸು | - 27 ವರ್ಷ | | |
| ಉದ್ಯೋಗ | - ಗೃಹಿಣಿ | | |
| ವಾಸ ಸ್ಥಳ | - ಎಂ.ಸಿ.ಹಳ್ಳಿ | | |

ದಿನಾಂಕಃ 30-01-2026 ರಂದು ಸಾಕ್ಷಿಗೆ ಪ್ರಮಾಣ ವಚನವನ್ನು ಬೋಧಿಸಲಾಯಿತು.

ಮುಖ್ಯ ವಿಚಾರಣೆ : ವಿಶೇಷ ಸರ್ಕಾರಿ ಅಭಿಯೋಜಕರಿಂದ-

1. ನ್ಯಾಯಾಲಯದಲ್ಲಿ ಹಾಜರಿರುವ ಆರೋಪಿತರು ಯಾರೆಂದು ನನಗೆ ಗೊತ್ತಿಲ್ಲ. ನಾನು ಅವರನ್ನು ಈ ಹಿಂದೆ ನೋಡಿಲ್ಲ. ಚಾಸಾ.4 ನನ್ನ ಅತ್ತೆ. ಚಾಸಾ.5 ನನ್ನ ಬಾವ. ಚಾಸಾ.6 ಮತ್ತು 7 ಗೊತ್ತು, ಅವರು ನಮ್ಮ ಊರಿನವರು. ಚಾಸಾ.2 ಮತ್ತು 3 ನನಗೆ ಗೊತ್ತಿಲ್ಲ.

2. ಆರೋಪಿತರಿಂದ ಚಾಸಾ.4 ರವರಿಗೆ ಯಾವುದೇ ತೊಂದರೆ ಆಗಿಲ್ಲ. ಆ ಬಗ್ಗೆ ನಾನು ಆರೋಪಿತರ ವಿರುದ್ಧ ಪೊಲೀಸರಿಗೆ ಯಾವುದೇ ದೂರು ಅಥವಾ ಹೇಳಿಕೆಯನ್ನು ನೀಡಿಲ್ಲ.

3. ಸಾಕ್ಷಿಗೆ ಎರಡು ದಾಖಲೆಗಳನ್ನು ತೋರಿಸಲಾಗಿ ಅವುಗಳಲ್ಲಿರುವ ತನ್ನ ಸಹಿಗಳನ್ನು ನೋಡಿ ಗುರುತಿಸಿರುತ್ತಾರೆ. ಸದರಿ ದಾಖಲೆಗಳು ದಿಃ 24-02-2021 ರಂದು ಸಾಕ್ಷಿಯು

ತರೀಕೆರೆ ಪೊಲೀಸರಿಗೆ ನೀಡಿದ್ದಾರೆ ಎಂದು ಹೇಳಲಾದ ದೂರು ಮತ್ತು ಸದರಿ ದೂರಿನ ಮೇರೆಗೆ ಪೊಲೀಸರು ದಾಖಲಿಸಿದ್ದಾರೆ ಎಂದು ಹೇಳಲಾದ ಪ್ರಥಮ ವರ್ತಮಾನ ವರದಿಯಾಗಿದ್ದು ಅವುಗಳನ್ನು ಕ್ರಮವಾಗಿ ನಿಪಿ.1 ಮತ್ತು ನಿಪಿ.2 ಎಂದು, ಅವುಗಳಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ.1(ಎ) ಮತ್ತು ನಿಪಿ.2(ಎ) ಎಂದು ಗುರುತಿಸಲಾಯಿತು.

4. ಸಾಕ್ಷಿಗೆ ಮತ್ತೊಂದು ದಾಖಲೆಯನ್ನು ತೋರಿಸಲಾಗಿ ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿರುತ್ತಾರೆ. ಸದರಿ ದಾಖಲೆಯು ದಿಃ 25-02-2021 ರಂದು ಸಾಕ್ಷಿಯು ತೋರಿಸಿದ ಸ್ಥಳದಲ್ಲಿ ಪೊಲೀಸರು ಜರುಗಿಸಿದ್ದಾರೆ ಎಂದು ಹೇಳಲಾದ ಪಂಚನಾಮೆಯಾಗಿದ್ದು, ಅದನ್ನು ನಿಪಿ.3 ಎಂದು ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ.3(ಎ) ಎಂದು ಗುರುತಿಸಲಾಯಿತು. 2021 ನೇ ಇಸವಿಯಲ್ಲಿ ಸದರಿ ಸಹಿಗಳನ್ನು ತರೀಕೆರೆ ಪೊಲೀಸ್ ಠಾಣೆಯಲ್ಲಿ ಪೊಲೀಸರು ಹೇಳಿದ ಮೇರೆಗೆ ಮಾಡಿದ್ದೇನೆ. ಆದರೆ ಯಾವ ವಿಚಾರಕ್ಕೆ ಎಂದು ನನಗೆ ಗೊತ್ತಿಲ್ಲ. ಸದರಿ ದಾಖಲೆಗಳಲ್ಲಿರುವ ವಿಚಾರಗಳು ನನಗೆ ಗೊತ್ತಿಲ್ಲ. ಪೊಲೀಸರು ಅದನ್ನು ನನಗೆ ಓದಿ ಹೇಳಿಲ್ಲ. ನಾನು ಪೊಲೀಸರಿಗೆ ಯಾವುದೇ ಸ್ಥಳವನ್ನು ತೋರಿಸಿಲ್ಲ ಮತ್ತು ಯಾವುದೇ ವಸ್ತುಗಳನ್ನು ಹಾಜರುಪಡಿಸಿಲ್ಲ, ಅದನ್ನು ಪೊಲೀಸರು ನನ್ನ ಸಮಕ್ಷಮ ಪಂಚನಾಮೆಯನ್ನು ಜರುಗಿಸಿ ಅಮಾನತು ಪಡಿಸಿಕೊಂಡಿಲ್ಲ.

5. ಸಾಕ್ಷಿಗೆ ಒಂದು ಫೋಟೋವನ್ನು ತೋರಿಸಲಾಗಿ ಅದರಲ್ಲಿ ತನ್ನ

ಇರುವಿಕೆಯನ್ನು ನೋಡಿ ಗುರುತಿಸಿರುತ್ತಾರೆ. ಸದರಿ ಫೋಟೋವನ್ನು ನಿಪಿ.4 ಎಂದು ಗುರುತಿಸಲಾಯಿತು. ಪೊಲೀಸರು ಹೇಳಿದ ಮೇರೆಗೆ ಸದರಿ ಫೋಟೋಗೆ ನಿಂತುಕೊಂಡಿದ್ದೇನೆ. ಆದರೆ ಸದರಿ ಫೋಟೋವನ್ನು ಯಾವ ವಿಚಾರಕ್ಕೆ ಯಾವ ಸ್ಥಳದಲ್ಲಿ ತೆಗೆದುಕೊಳ್ಳಲಾಗಿದೆ ನನಗೆ ಗೊತ್ತಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅಭಿಯೋಜಕರು ಅನುಮತಿ ಕೇಳಿರುತ್ತಾರೆ ದಾಖಲೆಗಳನ್ನು ಪರಿಶೀಲಿಸಿ ಅನುಮತಿ ನೀಡಲಾಯಿತು)

ಪಾಟೀ ಸವಾಲುಃ ವಿಶೇಷ ಸರ್ಕಾರಿ ಅಭಿಯೋಜಕರಿಂದಃ-

6. ದಿಃ 22-02-2021 ರಂದು ಸಂಜೆ 4.30 ಗಂಟೆಗೆ ನಾನು ಮನೆಯಲ್ಲಿರುವಾಗ ನಮ್ಮ ಮನೆಯ ಹಿಂದಿನ ಖಾಲಿ ಜಾಗದಲ್ಲಿ ನಾವುಗಳು ಅಡಿಕೆ ಸಸಿಗಳನ್ನು ಇಟ್ಟಿದ್ದು ಅಲ್ಲಿಗೆ ಆರೋಪಿತರು ಬಂದು ನಮ್ಮ ಅತ್ತೆಯಾದ ಚಾಸಾ.4 ರವರನ್ನು ಕರೆದು ಅಡಿಕೆ ಸಸಿಗಳನ್ನು ಯಾರು ಇಲ್ಲಿ ಇಟ್ಟಿದ್ದು ಇದು ನಮ್ಮ ಜಾಗ ಎಂದು ಹೇಳಿದರು ಎಂದರೆ ಸರಿಯಲ್ಲ. ಆಗ ಚಾಸಾ.4 ರವರು ಅಡಿಕೆ ಸಸಿಗಳು ನಮ್ಮದೇ ಅವುಗಳನ್ನು ನಾವು ನಮ್ಮ ಮನೆಯ ಹಿಂದೆ ಇಟ್ಟಿದ್ದೇವೆ ಎಂದು ಹೇಳಿದರು ಎಂದರೆ ಸರಿಯಲ್ಲ.

7. ನಂತರ ಚಾಸಾ.4 ರವರು ನಮ್ಮ ಅಂಗಡಿಗೆ ಹೋದರು ಎಂದರೆ ಸರಿಯಲ್ಲ. ನಂತರ ಆರೋಪಿತರು ನಮ್ಮ ಅಂಗಡಿಯ ಬಳಿ ಹೋಗಿ ಚಾಸಾ.4 ರವರನ್ನು ಕುರಿತು, ಆ ಜಾಗ ನಮ್ಮದು, ನೀವು ಅಡಿಕೆ ಸಸಿಗಳನ್ನು ತೆಗೆದುಕೊಳ್ಳಿ ಎಂದು ಅವರಿಗೆ ಅವಾಚ್ಯವಾಗಿ ಬೈದು ನಮ್ಮ ಅಂಗಡಿಯಿಂದ ಹೊರಗೆ ಬಂದ

ಚಾಸಾ.4 ರವರನ್ನು ಆರೋಪಿತರು ಸೂಳೆಮುಂಡೆ, ಬೇವರ್ಸಿ ಮುಂಡೆ ಎಂದು ಬೈದು ಅವರ ಸೀರೆಯನ್ನು ಹಿಡಿದು ಎಳೆದಾಡಿ ಹರಿದರು ಎಂದರೆ ಸರಿಯಲ್ಲ. ನೀವು ಅಡಿಕೆ ಸಸಿಗಳನ್ನು ತೆಗೆದುಕೊಳ್ಳದಿದ್ದರೆ ನಿಮ್ಮನ್ನು ಉಳಿಸುವುದಿಲ್ಲ, ನಾವು ನಿಮ್ಮ ಕುಟುಂಬದವರನ್ನು ನಾಶ ಮಾಡುತ್ತೇವೆ ಎಂದು ಆರೋಪಿತರು ಜೀವ ಬೆದರಿಕೆ ಹಾಕಿದರು ಎಂದರೆ ಸರಿಯಲ್ಲ. ನೀವೇನಾದರು ಪೊಲೀಸರಿಗೆ ದೂರು ನೀಡಿದರೆ ನಿಮ್ಮ ಮೇಲೆ ಜಾತಿ ನಿಂದನೆ ಕೇಸು ಮಾಡುತ್ತೇವೆ ಎಂದು ಬೆದರಿಕೆ ಹಾಕಿದರು ಎಂದರೆ ಸರಿಯಲ್ಲ. ನಂತರ ನಾನು ಚಾಸಾ.4 ರವರನ್ನು ಮನೆಗೆ ಕರೆದುಕೊಂಡು ಬಂದೆನು ಎಂದರೆ ಸರಿಯಲ್ಲ.

8. ನಂತರ ಗ್ರಾಮದ ಮುಖಂಡರಿಗೆ ಗಲಾಟೆಯ ಬಗ್ಗೆ ತಿಳಿಸಿ ಮಾತನಾಡಿದ್ದರು ಸಹ ಸಮಸ್ಯೆ ಬಗೆಹರಿಯದ ಕಾರಣ ತಡವಾಗಿ ದಿಃ 24-02-2021 ರಂದು ತರೀಕೆರೆ ಪೊಲೀಸ್ ಠಾಣೆಗೆ ಹೋಗಿ ಆರೋಪಿತರ ವಿರುದ್ಧ ಕ್ರಮ ಜರುಗಿಸುವಂತೆ ನಿಪಿ.1 ರಂತೆ ದೂರು ನೀಡಿದ್ದೇನೆ ಎಂದರೆ ಸರಿಯಲ್ಲ. ಸದರಿ ದೂರಿನ ಮೇರೆಗೆ ಪೊಲೀಸರು ನಿಪಿ.2 ರಂತೆ ಪ್ರಥಮ ವರ್ತಮಾನ ವರದಿಯನ್ನು ದಾಖಲಿಸಿ ಅದರ ಪ್ರತಿಯನ್ನು ನನಗೆ ನೀಡಿದ್ದಾರೆ ಎಂದರೆ ಸರಿಯಲ್ಲ.

9. ನಂತರ ದಿಃ 25-02-2021 ರಂದು ನಾನು ಪೊಲೀಸರಿಗೆ ಮೇಲೆ ಹೇಳಿದಂತೆ ಆರೋಪಿತರು ಮೇಲೆ ಹೇಳಿದಂತೆ ಕೃತ್ಯವೆಸಗಿದ್ದ ಸ್ಥಳವನ್ನು ಚಾಸಾ.2 ಮತ್ತು 3 ರವರ ಸಮಕ್ಷಮ ತೋರಿಸಿದ್ದೇನೆ ಮತ್ತು ಆರೋಪಿತರು ಘಟನಾ ಸಮಯದಲ್ಲಿ

ಹರಿದಿದ್ದ ಚಾಸಾ.4 ರವರ ಸೀರೆಯನ್ನು ಹಾಜರುಪಡಿಸಿದ್ದೇನೆ ಎಂದರೆ ಸರಿಯಲ್ಲ. ಸದರಿ ಸ್ಥಳದಲ್ಲಿ ಪೊಲೀಸರು ಮೇಲೆ ಹೇಳಿದ ಪಂಚರ ಸಮಕ್ಷಮ ನಿಪಿ.3 ರಂತೆ ಮಧ್ಯಾಹ್ನ 2 ಗಂಟೆಯಿಂದ 3 ಗಂಟೆಯವರೆಗೆ ಪಂಚನಾಮೆಯನ್ನು ಜರುಗಿಸಿ ಸದರಿ ಸೀರೆಯನ್ನು ಅಮಾನತುಪಡಿಸಿಕೊಂಡಿದ್ದಾರೆ ಎಂದರೆ ಸರಿಯಲ್ಲ. ಸದರಿ ಪಂಚನಾಮೆಗೆ ಪೊಲೀಸರು ನನ್ನ ಮತ್ತು ಪಂಚರ ಸಹಿಗಳನ್ನು ಪಡೆದಿದ್ದಾರೆ ಎಂದರೆ ಸರಿಯಲ್ಲ. ಆ ಸಮಯದಲ್ಲಿ ಪೊಲೀಸರು ನಿಪಿ.4 ರಂತೆ ಫೋಟೋವನ್ನು ತೆಗೆದಿದ್ದಾರೆ ಎಂದರೆ ಸರಿಯಲ್ಲ.

10. ಆರೋಪಿತರು ನಿಮ್ಮ ಕುಟುಂಬದವರ ವಿರುದ್ಧ ನೀಡಿರುವ ದೂರಿನ ಮೇರೆಗೆ ಇದೇ ನ್ಯಾಯಾಲಯದಲ್ಲಿ ಸ್ಪೆಷಲ್ ಸಿ.138/2021 ರಲ್ಲಿ ಪ್ರಕರಣ ದಾಖಲಾಗಿ ವಿಚಾರಣೆಯಲ್ಲಿದ್ದು ನೀವು ಸದರಿ ಪ್ರಕರಣದಲ್ಲಿ ರಾಜಿ ಮಾಡಿಕೊಂಡಿರುವ ಕಾರಣ ಈ ಪ್ರಕರಣದಲ್ಲಿ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ಹೇಳುತ್ತಿದ್ದೀರಿ ಎಂದರೆ ಸರಿಯಲ್ಲ.

ಪಾಟೀ ಸವಾಲು: ಆರೋಪಿತರ ಪರ ವಕೀಲರು ಸಾಕ್ಷಿಯ ಪಾಟೀ ಸವಾಲು ಇಲ್ಲವೆಂದು ನುಡಿದಿರುತ್ತಾರೆ.

(ನನ್ನ ಉಕ್ತಲೇಖನಕ್ಕೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸ.ಇ.ಎ.ಒ.

ಸಹಿ/-

(ಭಾನುಮತಿ ಬಿ.ಸಿ)

1 ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,

ಚಿಕ್ಕಮಗಳೂರು.